**ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಮೀಣ ನೀರು ಸರಬರಾಜು ಸಚಿವರು)**

ಅ) ಹೌದು.

ಆ) ಹೌದು.

ಇ) ಸೆಪ್ಟೆಂಬರ್ 2005ಕ್ಕೆ ಸಮೀಕ್ಷೆ ಕಾರ್ಯ ಮುಕ್ತಾಯಗೊಂಡಿರುತ್ತದೆ. ಸಮೀಕ್ಷೆಯಲ್ಲಿ ಗುರುತಿಸಲಾಗಿರುವ ಅರ್ಹ ಫಲಾನುಭವಿಗಳಿಗೆ 6 ತಿಂಗಳ ಅವಧಿಯ ತಾತ್ಕಾಲಿಕ ಕೂಪನ್‌ಗಳನ್ನು ನೀಡುವ ಪ್ರಕ್ರಿಯೆ ಆರಂಭವಾಗಿರುತ್ತದೆ. ಗಣಕೀಕೃತ ಪಡಿತರ ಚೀಟಿಗಳನ್ನು ಮುಂದಿನ 6 ತಿಂಗಳೊಳಗೆ ನೀಡಲಾಗುವುದು.

**387(397) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ)** : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾಗೇಪಲ್ಲಿಯಲ್ಲಿ ಕೃಷಿ ಉತ್ಪನ್ನ ಉಪ ಮಾರುಕಟ್ಟೆಯನ್ನು ಪೂರ್ಣ ಪ್ರಮಾಣದ ಕೃಷಿ ಉತ್ಪನ್ನ ಮಾರುಕಟ್ಟೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಆ) ಇದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

**ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)**

ಅ) ಇದೆ.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

**390(508) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)** : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು ಹಾಗೂ ಅವು ಎಲ್ಲೆಲ್ಲಿವೆ;

ಆ) ಈ ಕೃಷಿ ಮಾರುಕಟ್ಟೆಗಳಲ್ಲಿ ಮಧ್ಯವರ್ತಿಗಳ ಹಾವಳಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಇದರಿಂದ ರೈತರ ಉತ್ಪನ್ನಗಳಿಗೆ ಸರಿಯಾದ ಬೆಲೆ ಸಿಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರದ ನಿಲುವೇನು;

ಉ) ರೈತರ ಉತ್ಪನ್ನಗಳಿಗೆ ತೂಕ ಮತ್ತು ಅಳತೆಗಳಲ್ಲಿ ಮಾರುಕಟ್ಟೆಯಲ್ಲಿ ವ್ಯತ್ಯಾಸವಾಗುತ್ತಿರುವುದನ್ನು ಗಮನಿಸಲಾಗಿದೆಯೇ;

ಊ) ಹಾಗಿದ್ದಲ್ಲಿ, ಈ ತೂಕ ಮತ್ತು ಅಳತೆಯ ವ್ಯತ್ಯಾಸಕ್ಕೆ ಪಾರದರ್ಶಕ ನಿಲುವೇನು?

**ಶ್ರೀ ಶರಣ ಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)**

ಅ) 145 ಮುಖ್ಯ ಮಾರುಕಟ್ಟೆ ಹಾಗೂ 349 ಉಪ ಮಾರುಕಟ್ಟೆಗಳನ್ನು ಸ್ಥಾಪಿಸಿದ್ದು, ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

ಆ) ಬಂದಿದೆ.